ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಉ ನಿ : ಸುಮಪ : 2018–19 :** **ದಿನಾಂಕ : 27–08–2018**

# ಪತ್ರಿಕಾ ಆಮಂತ್ರಣ

**1.** ಕರ್ನಾಟಕ ಲಲಿತಕಲಾ ಅಕಾಡೆಮಿ ವತಿಯಿಂದ "ತಿಂಗಳ ಚಿತ್ರ" ಯುವ ಕಲಾವಿದರ ಕೃತಿಗಳ ಪ್ರತಿ ತಿಂಗಳ ಪ್ರದರ್ಶನ ಕಾರ್ಯಕ್ರಮ

**ಉದ್ಘಾಟನೆ:**

ಪ್ರೊ. ಎಂ.ಎ. ಹೆಗಡೆ, ಅಧ್ಯಕ್ಷರು, ಕರ್ನಾಟಕ ಯುಕ್ಷಗಾನ ಅಕಾಡೆಮಿ, ಬೆಂಗಳೂರು.

**ಅಧ್ಯಕ್ಷತೆ:**

ಪ್ರೊ. ಎಂ.ಜೆ. ಕಮಲಾಕ್ಷಿ, ಅಧ್ಯಕ್ಷರು, ಕರ್ನಾಟಕ ಲಲಿತಕಲಾ ಅಕಾಡೆಮಿ,

ದಿನಾಂಕ: 28–08–2018, ಮಂಗಳವಾರ, ಸಮಯ : ಬೆಳಿಗ್ಗೆ 11.00 ಗಂಟೆಗೆ.

ಸ್ಥಳ: ವರ್ಣ ಆರ್ಟ್ ಗ್ಯಾಲರಿ, 2ನೇ ಮಹಡಿ, ಕನ್ನಡ ಭವನ, ಜೆ. ಸಿ. ರಸ್ತೆ, ಬೆಂಗಳೂರು –560 002.

# ಪತ್ರಿಕಾ ಪ್ರಕಟಣೆ

**ಸಂಖ್ಯೆ: 887/987**

## ಕೊಡಗಿನಲ್ಲಿ ಅತಿವೃಷ್ಠಿಯಿಂದ ಹಾನಿಗೀಡಾಗಿರುವ ಮನೆಗಳನ್ನು ದೇಶದಲ್ಲೇ ಮಾದರಿಯಾಗುವಂತೆ ನಿರ್ಮಾಣ – ಯು.ಟಿ. ಖಾದರ್

**ಬೆಂಗಳೂರು, ಆಗಸ್ಟ್ 27, (ಕರ್ನಾಟಕ ವಾರ್ತೆ) :**

ಕೊಡಗು ಜಿಲ್ಲೆಯಲ್ಲಿ ಅತಿವೃಷ್ಠಿಯಿಂದಾಗಿ ಅಂದಾಜು 758 ಮನೆಗಳು ಸಂಪೂರ್ಣ ನಾಶವಾಗಿದ್ದು ದೇಶದಲ್ಲೇ ಮಾದರಿಯಾಗುವಂತ ಮನೆಗಳನ್ನು ಪುನರ್‍ನಿರ್ಮಾಣ ಮಾಡಲಾಗುವುದು ಎಂದು ವಸತಿ ಹಾಗೂ ನಗರಾಭಿವೃದ್ಧಿ ಸಚಿವ ಯು.ಟಿ. ಖಾದರ್ ಅವರು ತಿಳಿಸಿದರು.

ಅವರು ವಿಕಾಸಸೌಧದ ತಮ್ಮ ಕಚೇರಿಯಲ್ಲಿಂದು ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿ ಜಿಲ್ಲಾಡಳಿತ ಪುನರ್‍ವಸತಿ ಕಲ್ಪಿಸುವ ಸಂಬಂಧ ಕೊಡಗಿನ ವಿವಿಧ ಸ್ಥಳಗಳಲ್ಲಿ ಸುಮಾರು 42 ಎಕರೆ ಭೂಮಿಯನ್ನು ಗುರುತಿಸಿದ್ದು ಈಗಾಗಲೇ 24 ಎಕರೆ ಪ್ರದೇಶದಲ್ಲಿ ಸರ್ವೆ ಕಾರ್ಯವನ್ನು ಸಹ ಪೂರ್ಣಗೊಳಿಸಲಾಗಿದೆ ಎಂದರು.

ಗುಡ್ಡಗಾಡು ಪ್ರದೇಶಗಳಲ್ಲಿ ವಸತಿ ನಿರ್ಮಾಣ ಮಾಡುವುದು ಸವಾಲಿನ ಕೆಲಸ ಎಂದ ಸಚಿವರು ಯಾವ ಪ್ರದೇಶ ಜನ ವಸತಿಗೆ ಯೋಗ್ಯ ಎಂದು ಅಲ್ಲಿನ ಜಿಲ್ಲಾಡಳಿತ ಗುರುತಿಸಿದ್ದ ಅಂತಹ ಕಡೆಗಳಲ್ಲಿ ವಸತಿ ನಿರ್ಮಿಸಲಾಗುವುದು ಎಂದು ತಿಳಿಸಿದರು.

ವಸತಿ ನಿರ್ಗತಿಕರಿಗೆ ಒಂದೇ ಮಾದರಿಯ ಮನೆಗಳನ್ನು ನಿರ್ಮಿಸಲಾಗುವುದು. ಪ್ರಕೃತಿ ವಿಕೋಪ ಯೋಜನೆಯಡಿ ಮನೆಗಳನ್ನು ನಿರ್ಮಿಸಲಾಗುವುದು. ಮನೆಗಳ ನಿರ್ಮಾಣಕ್ಕೆ ವಿಶೇಷ ಅನುದಾನ ಬಳಕೆ ಮಾಡಲಾಗುವುದು ಎಂದರು.

ವಸತಿ ಇಲಾಖೆಯು ಯಾವ ರೀತಿಯ ಮನೆಗಳನ್ನು ನಿರ್ಮಿಸಬೇಕು ಎಂಬುದರ ಬಗ್ಗೆ ನೀಲ ನಕ್ಷೆ ತಯಾರು ಮಾಡಿದ್ದು ಮುಖ್ಯಮಂತ್ರಿಯವರು ಇಂದು ಸಭೆ ಕರೆದಿದ್ದಾರೆ ಅವರ ಜೊತೆ ಚರ್ಚಿಸಿದ ನಂತರ ಅಂತಿಮ ತೀರ್ಮಾನ ಕೈಗೊಳ್ಳಲಾಗುವುದು, ಅಲ್ಲದೆ ಸಣ್ಣ ಪ್ರಮಾಣದ ಹಾನಿಗೊಳಗಾದ ಮನೆಗಳಿಗೂ ಸೂಕ್ತ ಪರಿಹಾರ ನೀಡಲಾಗುವುದು ಎಂದು ತಿಳಿಸಿದರು.

ಸ್ಪಂದನ ಸಹಾಯವಾಣಿ ಕೇಂದ್ರ ಪ್ರಾರಂಭ:

ರಾಜೀವ್ ಗಾಂಧಿ ವಸತಿ ಕಾರ್ಪೋರೇಷನ್‍ಗೆ ಸಂಬಂಧಿಸಿದಂತೆ ಫಲಾನುಭವಿಗಳು ತಮ್ಮ ದೂರುಗಳನ್ನು ಹಾಗೂ ಇತರೆ ವಸತಿಗೆ ಸಂಬಂಧಿಸಿದ ಪ್ರಶ್ನೆಗಳನ್ನು ಕೇಳಲು ಸಹಾಯವಾಣಿ ಕೇಂದ್ರವನ್ನು ಪ್ರಾರಂಭಿಸಲಾಗಿದ್ದು ದೂರವಾಣಿ ಸಂಖ್ಯೆ 231188 ಕ್ಕೆ ಕರೆ ಮಾಡಿ ಮಾಹಿತಿ ಪಡೆಯಬಹುದಾಗಿದೆ ಎಂದರು. ಈ ಕೇಂದ್ರ ಸೆಪ್ಟೆಂಬರ್ 1 ರಿಂದ ಕಾರ್ಯಾರಂಭಿಸಲಿದೆ ಎಂದು ವಸತಿ ಸಚಿವ ಯು.ಟಿ. ಖಾದರ್ ಅವರು ತಿಳಿಸಿದರು.

**ಸಂಖ್ಯೆ: 888/988**

# ಅರ್ಜಿ ಆಹ್ವಾನ

ಬೆಂಗಳೂರು, ಆಗಸ್ಟ್ 28, (ಕರ್ನಾಟಕ ವಾರ್ತೆ) :

2018–19 ನೇ ಸಾಲಿಗೆ, ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಇರುವ ಪ್ರಥಮ ಡಿ. ಫಾರ್ಮ ಕೋರ್ಸಿನ ಸರ್ಕಾರಿ ಕೋಟಾ ಸೀಟುಗಳಿಗೆ ಪ್ರವೇಶ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಿದೆ.

ಪ್ರವೇಶ ಬಯಸುವ ಅರ್ಹ ಅಭ್ಯರ್ಥಿಗಳು ಸಂಬಂಧಿಸಿದ ಮೂಲ ದಾಖಲೆಗಳು ಮತ್ತು ದೃಢೀಕೃತ ಪ್ರತಿಗಳೊಂದಿಗೆ ದಿನಾಂಕ: 28–08–2018 ರಂದು ಬೆಳಿಗ್ಗೆ 9.00 ಗಂಟೆಗೆ ಸರ್ಕಾರಿ ಔಷಧ ವಿಜ್ಞಾನ ಮಹಾವಿದ್ಯಾಲಯ, ನಂ 2, ಪಿ. ಕಾಳಿಂಗರಾವ್ ರಸ್ತೆ, ಸುಬ್ಬಯ್ಯ ವೃತ್ತ, ಬೆಂಗಳೂರು – 560 027 ಇಲ್ಲಿ ಹಾಜರಿರಬೇಕೆಂದು ಈ ಮೂಲಕ ತಿಳಿಸಲಾಗಿದೆ. ಇಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಪ್ರವೇಶ ಪಡೆಯಲು ತಾವು ಆಯ್ಕೆ ಮಾಡಿಕೊಂಡ ಶಿಕ್ಷಣ ಸಂಸ್ಥೆಗೆ ದಿನಾಂಕ: 30–08–2018 ರೊಳಗೆ ಪ್ರವೇಶ ಶುಲ್ಕ ರೂ 12,000/– ಗಳನ್ನು ಪಾವತಿಸತಕ್ಕದ್ದು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 080–225483465, 080–22223466 ಅಥವಾ email: beadpharmacy@yahoo.com, bea.dcd_ka@nic.in website: www.beadpharmacy.org. ವೀಕ್ಷಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

**ಸಂಖ್ಯೆ: 889/989**

# ಆಗಸ್ಟ್ 29 ರಂದು ಬೆಳ್ಳಿಹಬ್ಬ ಕಾರ್ಯಕ್ರಮ

ಬೆಂಗಳೂರು, ಆಗಸ್ಟ್ 28, (ಕರ್ನಾಟಕ ವಾರ್ತೆ) :

ಕನ್ನಡ ಪುಸ್ತಕ ಪ್ರಾಧಿಕಾರವು ಆಗಸ್ಟ್ 29 ರ ಬುಧವಾರದಂದು ಬೆಳಿಗ್ಗೆ 11.00 ಗಂಟೆಗೆ “ಬೆಳ್ಳಿ ಹಬ್ಬ” ಕಾರ್ಯಕ್ರಮವನ್ನು ನಗರದ ನಯನ ಸಭಾಂಗಣ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು ಇಲ್ಲಿ ಹಮ್ಮಿಕೊಳ್ಳಲಾಗಿದೆ.

ಈ ಸಮಾರಂಭದ ಉದ್ಘಾಟನೆಯನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವೆ ಶ್ರೀಮತಿ ಜಯಮಾಲ ರಾಮಚಂದ್ರ ಅವರು ನೆರವೇರಿಸಲಿದ್ದಾರೆ.

ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿ ಎಂ. ವೀರಪ್ಪ ಮೊಯಿಲಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರ್ದೇಶಕ ಎನ್. ಆರ್. ವಿಶುಕುಮಾರ್ ಅವರು ಪಾಲ್ಗೊಳ್ಳಲಿದ್ದಾರೆ.

ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷ ಡಾ. ವಸುಂಧರಾ ಭೂಪತಿ ಅವರು ಸಮಾರಂಭದ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

**ಸಂಖ್ಯೆ: 890/990**

## <u>ಕಂದಾಯ ಸಚಿವರ ಪ್ರವಾಸ</u>

**ಬೆಂಗಳೂರು, ಆಗಸ್ಟ್ 28, (ಕರ್ನಾಟಕ ವಾರ್ತೆ) :**

ಕಂದಾಯ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವ ಆರ್. ವಿ. ದೇಶಪಾಂಡೆ ಅವರು ಆಗಸ್ಟ್ 28 ರಂದು ಕೊಡಗು ಹಾಗೂ ಮೈಸೂರು ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು ಆಗಸ್ಟ್ 29 ರಂದು ಬೆಂಗಳೂರಿಗೆ ಹಿಂತಿರುಗಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.